<u>ಅಸಲು ದಾವಾ ಸಂಖ್ಯೆಃ **- 181/2023**</u> ಪಿ.ಡಬ್ಲ್ಯೂ.**:-1**

ದಿನಾಂಕಃ **05-04-2025** ರಂದು ಸಾಕ್ಷಿಯು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣ ವಚನ ಬೋಧಿಸಲಾಯಿತು.

<u>ಪಾಟೀ ಸವಾಲು :- ಪ್ರತಿವಾದಿ ಪರ ವಕೀಲರಿಂದ :-</u>

ನನ್ನ ತಂದೆ ವಾದಿಗೆ ಮಧುಮೇಹ, ರಕ್ತದೊತ್ತಡ ಮತ್ತು ಮಂಡಿನೋವಿನಿಂದ ಬಳಲುತ್ತಿದ್ದಾರೆ. ನಮ್ಮ ತಂದೆಯವರು ತಮ್ಮ ದಿನನಿತ್ಯದ ಚಟುವಟಿಕೆಗಳನ್ನು ತಾವೇ ಮಾಡಿಕೊಳ್ಳುತ್ತಾರೆಎಂದರೆ ಸರಿ. ಸಾಕ್ಷಿಯು ಮುಂದುವರೆದು ನಮ್ಮ ತಂದೆಗೆ ಬಸ್ಸು ಹತ್ತಲು ಮತ್ತು ನ್ಯಾಯಾಲಯಕ್ಕೆ ಬರಲು ಕಷ್ಟವಾಗುತ್ತದೆ ಎಂದು ನುಡಿಯುತ್ತಾರೆ. ನಮ್ಮ ತಂದೆಯವರಿಗೆ ಮಧುಮೇಹ, ರಕ್ತದೊತ್ತಡ ಮತ್ತು ಮಂಡಿನೋವು ಇರುವ ಬಗ್ಗೆ ಯಾವುದೇ ದಾಖಲಾತಿಗಳನ್ನು ಹಾಜರುಪಡಿಸಿರುವುದಿಲ್ಲ ಮತ್ತು ಹಾಜರುಪಡಿಸಲು ಯಾವುದೇ ತೊಂದರೆ ಇರುವುದಿಲ್ಲ ಎಂದು ನುಡಿಯುತ್ತಾರೆ. ಪ್ರತಿವಾದಿಗಳು ನಮಗೆ ಸೇರಿದ ಜಮೀನನ್ನು ಒತ್ತುವರಿ ಮಾಡಿದ್ದರಿಂದ ನಮ್ಮ ಜಮೀನು ನಮಗೆ ಬೇಕು ಎಂದು ದಾವೆಯನ್ನು ಸಲ್ಲಿಸಿದ್ದೇನೆ. ದಾವಾ ಆಸ್ತಿಯ ಸರ್ವೇ ನಂ.1/3. ದಾವಾ ಆಸ್ತಿಯು ನಮ್ಮ ಕುಟುಂಬದ ಪಿತ್ರಾರ್ಜಿತ ಆಸ್ತಿ ಆಗಿರುತ್ತದೆ. ದಾವಾ ಆಸ್ತಿಯ ಖಾತೆ ಮತ್ತು ಪಹಣಿ ನಮ್ಮ ತಂದೆಯವರ ಹೆಸರಿನಲ್ಲಿರುತ್ತದೆ. ದಾವಾ ಆಸ್ತಿಯು ನಮ್ಮ ಕುಟುಂಬದ ಪಿತ್ರಾರ್ಜಿತ ಆಸ್ತಿ ಅಲ್ಲ ಎಂದರೆ ಸರಿಯಲ್ಲ.

ಮುಂದುವರೆದ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು, ಕಾಲಾವಕಾಶ ನೀಡಲಾಯಿತು.

ಸಾ. ಹೇ. ತೆ. ನ್ಯಾ. ಬೆ. ಮಾಡಿಸಲಾಯಿತು.

ಓ. ಹೇ. ಕೇ. ಸ. ಇದೆ.

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ., ಹೊನ್ನಾಳಿ.